ಉಂಟಾದ ರೈತರ ಬೆಳೆಗಳ ನಷ್ಟಕ್ಕೆ, ಕಾಡಾನೆಗಳ ದಾಳಿಯಿಂದ ಗಾಯಗೊಂಡವರಿಗೆ ಹಾಗೂ ಮೃತಪಟ್ಟ ವಾರಸುದಾರರಿಗೆ ಪರಿಹಾರ/ದಯಾತ್ಮಕ ಧನವನ್ನು ನೀಡಲಾಗುತ್ತಿದೆ.

ಆಸ್ಪತ್ರೆಯನ್ನು ಸ್ಥಳಾಂತರಿಸುವುದು

397 (860) ಶ್ರೀ ಕುಮಾರಸ್ವಾಮಿ ಹೆಚ್.ಕೆ (ಸಕಲೇಶಪುರ) ಮಾನ್ಯ ಜಲಸಂಪನ್ಮೂಲ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಹಾಸನ ತಾಲ್ಲೂಕು, ಕಟ್ಟಾಯ ಹೋಬಳಿಯ, ಗೊರೂರು ಗ್ರಾಮದಲ್ಲಿ ನೀರಾವರಿ ಇಲಾಖೆಯವರು ನಿರ್ವಹಣೆ ಮಾಡುತ್ತಿರುವ ಪ್ರಾಥಮಿಕ ಆರೋಗ್ಯ ಕೇಂದ್ರವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ ಈ ಕೇಂದ್ರಕ್ಕೆ ರೋಗಿಗಳು ಬಾರದೇ ನಿರುಪಯುಕ್ತವಾಗಿರುವುದರಿಂದ ಇಲಾಖೆಯವರು ಸ್ಥಳಾಂತರಕ್ಕೆ ಶಿಫಾರಸ್ಸು ಮಾಡಿರುವುದು ನಿಜವೇ;

(ಇ) ಹಾಗಿದ್ದಲ್ಲಿ ಈ ಕೇಂದ್ರವನ್ನು ಗೊರೂರಿನಿಂದ 8 ಕಿ.ಮೀ. ದೂರದಲ್ಲಿರುವ ಹೋಬಳಿ ಕೇಂದ್ರ ಕಟ್ಟಾಯ ಗ್ರಾಮಕ್ಕೆ ಸ್ಥಳಾಂತರಿಸುವ ಉದೇಶ ಸರ್ಕಾರಕ್ಕಿದೆಯೇ?

ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಜಲಸಂಪನ್ಮೂಲ ಸಚಿವರು)

(ಅ) ಸರ್ಕಾರದ ಆದೇಶ ಸಂಖ್ಯೆ: ಪಿಡಬ್ಲ್ಯೂಡಿ 338 ಎಸ್‌ಸಿಓ 68, ದಿನಾಂಕ: 16–06–1969, ರಲ್ಲಿ ಹೇಮಾವತಿ ವಸಾಹತು ಕಾಲೋನಿ ಗೊರೂರುನಲ್ಲಿ ಹೇಮಾವತಿ ಜಲಾಶಯ ಆಸ್ಪತ್ರೆಯನ್ನು ಸ್ಥಾಪನೆ ಮಾಡಲಾಗಿರುತ್ತದೆ.

(ಆ) ಹೇಮಾವತಿ ಜಲಾಶಯ ಆಸ್ಪತ್ರೆಯನ್ನು ಮಾತೃ ಇಲಾಖೆಯಿಂದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ವಹಿಸಿಕೊಳ್ಳಲು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯನ್ನು ಕೋರಲಾಗಿರುತ್ತದೆ.

(ಇ) ಹೇಮಾವತಿ ಜಲಾಶಯ ಆಸ್ಪತ್ರೆಯನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ವಹಿಸಿಕೊಂಡ ನಂತರ ಸ್ಥಳಾಂತರಿಸುವ ಬಗ್ಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಮುಂದಿನ ಕ್ರಮ ಕೈಗೊಳ್ಳಬೇಕಾಗಿರುತ್ತದೆ.

ಶೀತಪೀಡಿತ ಹಳ್ಳಿಗಳು

398 (861) ಶ್ರೀ ಕುಮಾರಸ್ವಾಮಿ ಹೆಚ್.ಕೆ (ಸಕಲೇಶಪುರ) ಮಾನ್ಯ ಜಲಸಂಪನ್ಮೂಲ ಸಚಿವರು ದಯೆಯಿಟ್ಟು ಈ ಪ್ರಶ್ನೆಗಳಿಗೆ ಉತ್ತರಿಸುವರೆ:–